4. ಬೇರೆ ಬಸ್ ಅವಕಾಶವಿಲ್ಲದ ಪ್ರದೇಶಗಳಲ್ಲಿ ಮೊದಲಿನಂತೆಯೇ ವೇಗದೂತ ಬಸ್ಸುಗಳಲ್ಲಿಯೂ ಪಾಸ್ ಪಡೆದಿರುವ ವಿದ್ಯಾರ್ಥಿಗಳು ಪ್ರವಾಸ ಮಾಡಲು ಅವಕಾಶ ಮಾಡಿಕೊಡಲಾಗುವುದೇ : ಅಥವಾ ಬೇರೆ ಬಸ್ಸುಗಳ ಸೌಕರ್ಯ ಒದಗಿಸಲಾಗುವುದೇ ?

ಶ್ರೀ. ಭೀಮಣ್ಣ ಖಂಡ್ರೆ (ಸಾರಿಗೆ ಸಚಿವರು) :-

1. 9 ಮತ್ತು 3

2. ಹೌದು

3. ದಿನಾಂಕ 12-8-94 ರಿಂದ ವಿದ್ಯಾರ್ಥಿಗಳಿಗೆ ಎಲ್ಲಾ ವೇಗದೂತ ಸಾರಿಗೆಗಳಲ್ಲಿ ಪ್ರಯಾಣ ಮಾಡಲು ಅವಕಾಶ ನೀಡಲಾಗಿದೆ.

4. ಉದ್ಭವಿಸುವುದಿಲ್ಲ

ದಿನಾಂಕ 7.9.94ರ ಚುಕ್ಕೆ ಗುರುತಿನ ಪ್ರಶ್ನೋತ್ತರಗಳು.

ವಿಷಯ : ಮೀನು ಸಾಗಿಣಿಕೆಗೆ ಕೆರೆಗಳಲ್ಲಿ ಹೂಳು.

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 175 (437)

ಶ್ರೀ. ಕರಿಯಣ್ಣ (ಹೊಳೆಹೊನ್ನೂರು):- ಮಾನ್ಯ ಮೀನುಗಾರಿಗೆ ಮತ್ತು ಬಂದರು ರಾಜ್ಯ.ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೀನು ಸಾಕಾಣಿಕೆದಾರರಿಗೆ ನೀಡಿರುವ ಕೆರೆಗಳಲ್ಲಿ ಹೂಳು ತುಂಬಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಬಂದಿದ್ದಲ್ಲಿ ಸರ್ಕಾರ ಈ ಬಗ್ಗೆ ಕೈಗೊಂಡ ಕ್ರಮಗಳೇನು ?

ಶ್ರೀ. ವಸಂತ ವಿ. ಸಾಲಿಯಾನ (ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು) :-

ಅ) ಹೌದು.

ಆ) ಇದು, ಲೋಕೋಪಯೋಗಿ ಇಲಾಖೆಗೆ ಸೇರಿದ್ದು ಸಣ್ಣ ನೀರಾವರಿ ಇಲಾಖೆಯಿಂದ ಕೆಲವು ಕೆರೆಗಳಲ್ಲಿ ಹೂಳು ಎತ್ತುವ ಕ್ರಮವನ್ನು ಹಂತ ಹಂತವಾಗಿ ತೆಗೆದು ಕೊಳ್ಳಲು ಕೇಳಿ ಕೊಳ್ಳಲಾಗುವುದು.

ವಿಷಯ : ಬೀದರ್ ಜಿಲ್ಲೆಯಲ್ಲಿ ವೈದ್ಯರ ಹುದ್ದೆಗಳನ್ನು ಭರ್ತಿ ಮಾಡುವುದರ ಬಗ್ಗೆ.

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 176 (778)

ಶ್ರೀ. ನಾರಾಯಣರಾವ್ ಮನಹಳ್ಳಿ (ಬೀದರ್):- ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೀದರ್ ಜಿಲ್ಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ವೈದ್ಯರುಗಳು ಹಾಗೂ ವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ಅಂಕಿ ಅಂಶಗಳನ್ನು ಒದಗಿಸುವುದು).

ಆ) ಜಿಲ್ಲೆಗೆ ಮಂಜೂರಾಗಿರುವ ವೈದ್ಯರು ಹಾಗೂ ವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು?

ಇ) ಈ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ?

ಡಾ : ಎ.ಬಿ. ಮಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :-

ಅ) ಬೀದರ್ ಜಿಲ್ಲೆಯಲ್ಲಿ 102 ವೈದ್ಯರು ಕೆಲಸ ಮಾಡುತ್ತಿದ್ದಾರೆ

ಬೀದರ್ ತಾಲ್ಲೂಕು	-	34
ಔರಾದ್ ತಾಲ್ಲೂಕು	-	13
ಭಾಲ್ಕಿ ತಾಲ್ಲೂಕು	-	16
ಹುಮ್ನಾಬಾದ ತಾಲ್ಲೂಕು	-	20
ಬಸವಕಲ್ಯಾಣ ತಾಲ್ಲೂಕು	-	19
ಒಟ್ಟು		102

ಆ) 116.

ಇ) ಸರ್ಕಾರಿ ಆದೇಶ ಸಂಖ್ಯೆ : ಆಕುಕ 428 ಹೆಚ್‌ಎಸ್‌ಹೆಚ್ 94, ದಿನಾಂಕ 16-6-94ರಲ್ಲಿ ಗುತ್ತಿಗೆ ಆಧಾರದ ಮೇಲೆ ಗ್ರಾಮಾಂತರ ಪ್ರದೇಶದ ಒಂದು ಹುದ್ದೆಯನ್ನು ಭರ್ತಿ ಮಾಡಲಾಗಿದೆ. ಉಳಿದ ಖಾಲಿ ಹುದ್ದೆಗಳನ್ನು ಸ್ನಾತಕೋತ್ತರ ವಿದ್ಯಾಭ್ಯಾಸದಿಂದ ವಾಪಸ್ಸು ಬಂದಿರುವ ವೈದ್ಯರುಗಳನ್ನು ನೇಮಿಸಿ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ವಿಷಯ : ಮೈಸೂರು ಬೆಂಗಳೂರು ಆಸ್ಪತ್ರೆಗಳ ನವೀಕರಣ

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 177 (611)

ಶ್ರೀ. ವಾಟಾಳ ನಾಗರಾಜ್ (ಚಾಮರಾಜನಗರ):-ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಮೈಸೂರಿನ ಕೃಷ್ಣರಾಜೇಂದ್ರ ಆಸ್ಪತ್ರೆ, ಬೆಂಗಳೂರಿನ ವಿಕ್ಟೋರಿಯಾ ಆಸ್ಪತ್ರೆ ಹಾಗೂ ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆ ಇವುಗಳನ್ನು ನವೀಕರಿಸಲು ಸರ್ಕಾರ ಯೋಚಿಸಿದೆಯೇ?

ಶ್ರೀ. ಬಿ. ಶಿವಣ್ಣ (ವೈದ್ಯಕೀಯ ಶಿಕ್ಷಣ ಸಚಿವರು):-

1. ಹೌದು ಯೋಚಿಸಿದೆ.